ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ

ಸಿ.ಸಿ. ನಂಬ್ರ:1628/2018

ಚಾಸಾ:4 ಪ್ರಾಸಾ:3

ದಿನಾಂಕ: 04.10.2024

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ಫೆಡ್ರಿಕ್ ಕರ್ವೆಲ್ಲೋ |
| ತಂದೆಯ ಹೆಸರು | : | ಎಲ್ ಎಸ್ ಕರ್ವೆಲ್ಲೋ |
| ವಯಸ್ಸು | : | 62 ವರ್ಷ |
| ಉದ್ಯೋಗ | : | ಮನೆಯಲ್ಲಿ ಇರುವುದು |
| ವಾಸ ಸ್ಥಳ | : | ಬಸ್ರೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

<u>**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**</u>

ಸಾಕ್ಷಿಗೆ ನಿಪಿ-1ನ್ನು ತೋರಿಸಲಾಗಿ, ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸದ್ರಿ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ಗೊತ್ತಿಲ್ಲ. ಯಾವ ಕಾರಣಕ್ಕಾಗಿ ಸಹಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ ಮತ್ತು ನಾನು ಯಾವುದೇ ಹೇಳಿಕೆಯನ್ನು ನೀಡಿಲ್ಲ. ಸಾಕ್ಷಿ ನಿಪಿ-11 ನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ದವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

<u>**ಪಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**</u>

ದಿ:27-10-2017 ರಂದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದು, ಚಾಸಾ-1ರವರು ತೋರಿಸಿದ ಸ್ಥಳದಲ್ಲಿ ನನ್ನ ಮತ್ತು ಚಾಸಾ-8 ರವರ ಸಮಕ್ಷಮ ಬೆಳಿಗ್ಗೆ 5 ರಿಂದ 6ರವರೆಗೆ

ಪಂಚನಾಮೆ ಜರುಗಿಸಿ ವಾಹನ ಸಂಖ್ಯೆ ಕೆಎ-20-ಸಿ-3817 ವಾಹನವನ್ನು ವಶಕ್ಕೆ ಪಡೆದು ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಸಾಕ್ಷಿಗೆ ದಿಃ 23-11-2017 ರ ಹೇಳಿಕೆಯನ್ನು ಓದಿ ತಿಳಿಸಿದ್ದು ಅದನ್ನು ಸಾಕ್ಷಿ ಒಪ್ಪಿರುವುದಿಲ್ಲ. ಸದ್ರಿ ಹೇಳಿಕೆಯನ್ನು ನಿಪಿ- 14 ಎಂದು ಗುರುತಿಸಲಾಯಿತು.

ಮೇಲೆ ಹೇಳಿದ ಕ್ರಮವನ್ನು ನನ್ನ ಸಮಕ್ಷಮ ಜರುಗಿಸಿದ್ದರೂ ಆರೋಪಿ ನನ್ನ ಪರಿಚಯಸ್ಥರಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**